**All India Radio: Bangalore**
**Regional Bulletin In Kannada**
**08.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**08.07.2025 / 2.30 p.m.**
**<><><><>**

ಮುಖ್ಯಾಂಶಗಳು

1. ಪಡಿತರ ಆಹಾರ ಧಾನ್ಯ ಸಾಗಣೆ ವೆಚ್ಚ ಬಾಕಿ ಹಿನ್ನೆಲೆ ; ಇಂದಿನಿಂದ ಲಾರಿ ಮಾಲೀಕರಿಂದ ಮುಷ್ಕರ
2. ಹಾವೇರಿ ನಗರಕ್ಕೆ ಕುಡಿಯುವ ನೀರು ಯೋಜನೆ ; ಮೊದಲ ಕಂತಿನಲ್ಲಿ ೫೦ ಕೋಟಿ ರೂಪಾಯಿ ಅನುದಾನ ಬಿಡುಗಡೆ
3. ಅನ್ನಭಾಗ್ಯ ಯೋಜನೆ ಧಾನ್ಯ ಸಾಗಣೆ ಬಿಲ್ ಪಾವತಿ ವಿಳಂಬ ; ಬಿಜೆಪಿ ಖಂಡನೆ
4. ಮುಖ್ಯಮಂತ್ರಿ ವಿರುದ್ಧ ಅವಹೇಳನಕಾರಿ ಪೋಸ್ಟ್ ; ಪೊಲೀಸ್ ಠಾಣೆಯಲ್ಲಿ ದೂರು ದಾಖಲು

<><><><>

ರಾಜ್ಯಾದ್ಯಂತ ನ್ಯಾಯ ಬೆಲೆ ಅಂಗಡಿಗೆ ಪಡಿತರ ಆಹಾರ ಧಾನ್ಯ ಸಾಗಣೆ ವೆಚ್ಚ ೨೬೦ ಕೋಟಿ ರೂಪಾಯಿ ಬಿಡುಗಡೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಡಿತರ ಸಾಗಣೆ ಸ್ಥಗಿತ ಗೊಳಿಸಿ ಇಂದಿನಿಂದ ಮುಷ್ಕರ ನಡೆಸಲು ಲಾರಿ ಮಾಲೀಕರು ನಿರ್ಧರಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಷಣ್ಮುಗಪ್ಪ, ನಾಲ್ಕು ಸಾವಿರ ಪಡಿತರ ಸಾಗಣೆ ಲಾರಿಗಳು ಸ್ಥಗಿತಗೊಳ್ಳಲಿದ್ದು ಪಡಿತರ ವಿತರಣೆಯಲ್ಲಿ ವ್ಯತ್ಯಾಸವಾಗುವ ಸಾಧ್ಯತೆ ಇದೆ ಎಂದರು.

<><><><>

ಅನ್ನಭಾಗ್ಯ ಹಾಗೂ ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಯೋಜನೆಗಳ ಆಹಾರ ಧಾನ್ಯ ಸಾಗಾಣೆ ವೆಚ್ಚದ ಬಿಲ್ ಕಳೆದ ೫ ತಿಂಗಳಿನಿಂದ ಸರ್ಕಾರ ಪಾವತಿ ಮಾಡದೇ ಇರುವುದನ್ನು ಬಿಜೆಪಿ ಖಂಡಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿರುವ ಪ್ರತಿಪಕ್ಷ ನಾಯಕ ಆರ್. ಅಶೋಕ, ಅನ್ನಭಾಗ್ಯ ಯೋಜನೆಯ ಸಾರಥಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದ ೪ ಸಾವಿರದ ೫೦೦ ಲಾರಿ ಮಾಲೀಕರಿಗೆ ತಿಂಗಳುಗಟ್ಟಲೇ ಬಾಡಿಗೆ ಪಾವತಿಸದೆ ಸರ್ಕಾರ ಬೇಜವಾಬ್ದಾರಿತನ ಮೆರೆದಿದೆ ಎಂದು ದೂರಿದ್ದಾರೆ. ಲಾರೀ ಮಾಲೀಕರಿಗೆ ಸುಮಾರು ೬ ತಿಂಗಳಿಂದ ೨೫೦ ಕೋಟಿ ರೂಪಾಯಿ ಬಿಲ್ ಬಾಕಿ ಉಳಿಸಿಕೊಂಡಿರುವುದು ಸರ್ಕಾರ ದಿವಾಳಿಯಾಗಿರುವುದಕ್ಕೆ ಸಾಕ್ಷಿ ಎಂದು ಆರೋಪಿಸಿದ್ದಾರೆ. ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಆಗ್ರಹಿಸಿದ್ದಾರೆ.

<><><><>

ಹಾವೇರಿ ನಗರಕ್ಕೆ ಕುಡಿಯುವ ನೀರು ಪೂರೈಸುವ ನಿಟ್ಟಿನಲ್ಲಿ ಕಂಚಾರಗಟ್ಟಿ ಬಳಿ ತುಂಗಭದ್ರಾ ನದಿಗೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣಕ್ಕೆ ಮೊದಲ ಕಂತಿನಲ್ಲಿ ೫೦ ಕೋಟಿ ರೂಪಾಯಿ ಅನುದಾನ ಬಿಡುಗಡೆಯಾಗಿದೆ ಎಂದು ಶಾಸಕ, ವಿಧಾನಸಭೆ ಉಪಸಭಾಪತಿ ರುದ್ರಪ್ಪ ಲಮಾಣಿ ತಿಳಿಸಿದ್ದಾರೆ. ಹಾವೇರಿ ನಗರಸಭೆ ಕಚೇರಿ ಸಭಾಂಗಣದಲ್ಲಿಂದು ಆಯೋಜಿಸಿದ್ದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಈ ಯೋಜನೆಗೆ ೧೫೦ ಕೋಟಿ

ರೂಪಾಯಿ ಅನುದಾನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಬ್ಯಾರೇಜ್ ನಿರ್ಮಾಣಕ್ಕೆ ನೀರಾವರಿ ಇಲಾಖೆ ಅಧಿಕಾರಿಗಳು ಸರ್ವೇ ನಡೆಸಿ ಡಿಪಿಎಆರ್ ಸಿದ್ಧಪಡಿಸಲಿದ್ದಾರೆ. ಈ ಕಾಮಗಾರಿ ನಿರ್ಮಾಣವಾದರೆ ಹಾವೇರಿ ನಗರಕ್ಕೆ ನೀರಿನ ಸಮಸ್ಯೆ ಬಗೆಹರಿಯಲಿದೆ ಎಂದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸಾಮಾಜಿಕ ಮಾಧ್ಯಮಗಳಲ್ಲಿ ಅವಹೇಳನಕಾರಿ ಪೋಸ್ಟ್‌ಗಳ ಕುರಿತು ಕಾಂಗ್ರೆಸ್‌ನ ರಾಜ್ಯ ಘಟಕವು ಇಂದು ಬೆಂಗಳೂರಿನ ಪೀಣ್ಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ. ಅವರು ನಿನ್ನೆ, ಆರೋಗ್ಯ ತಪಾಸಣೆಗಾಗಿ ಬೆಂಗಳೂರಿನ ಶೇಷಾದ್ರಿಪುರಂನಲ್ಲಿರುವ ಆಸ್ಪತ್ರೆಗೆ ಭೇಟಿ ನೀಡಿದ ನಂತರ ಸಾಮಾಜಿಕ ಮಾಧ್ಯಮದಲ್ಲಿ ಅವಹೇಳನಕಾರಿ ಪೋಸ್ಟ್‌ಗಳನ್ನು ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಇಂತಹ ಪೋಸ್ಟ್‌ಗಳು ಕಾನೂನು ಮತ್ತು ಸುವ್ಯವಸ್ಥೆಯ ಮೇಲೆ ಗಂಭೀರ ಪರಿಣಾಮಗಳನ್ನು ಬೀರಬಹುದು ಮತ್ತು ಶಾಂತಿ ಮತ್ತು ಸಾಮಾಜಿಕ ಸಾಮರಸ್ಯವನ್ನು ಕದಡಬಹುದು, ತಪ್ಪಿತಸ್ಥರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳುವಂತೆ ಕಾಂಗ್ರೆಸ್ ರಾಜ್ಯ ಘಟಕ ಒತ್ತಾಯಿಸಲಾಗಿದೆ.

<><><>

ನವದೆಹಲಿ ಪ್ರವಾಸದಲ್ಲಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೆಂದರ್ ಯಾದವ್ ಅವರನ್ನು ಭೇಟಿ ಮಾಡಿದ್ದಾರೆ. ಈ ವೇಳೆ ಅವರು, ಬಾಕಿ ಉಳಿದಿರುವ ಕರ್ನಾಟಕದ ಯೋಜನೆಗಳಿಗೆ ಪರಿಸರ ಇಲಾಖೆ ಅನುಮತಿ ನೀಡುವ ಸಂಬಂಧ ಮಾತುಕತೆ ನಡೆಸಿದ್ದಾರೆ. ಇಂದು ಅವರು, ಕೇಂದ್ರ ನೀರಾವರಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಭೇಟಿ ಮಾಡಿ, ನೀರಾವರಿ ಯೋಜನೆಗಳ ಕುರಿತಂತೆಯೂ ಚರ್ಚೆ ನಡೆಸಲಿದ್ದಾರೆ.

<><><>

ಇದೇ ೧೨ ರಂದು ದಾವಣಗೆರೆ ಜಿಲ್ಲೆಯ ಎಲ್ಲ ೨೪ ನ್ಯಾಯಾಲಯಗಳಲ್ಲಿ ಹಮ್ಮಿಕೊಂಡಿರುವ ರಾಷ್ಟ್ರೀಯ ಲೋಕ್ ಅದಾಲತ್ ಅಂಗವಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಹಮ್ಮಿಕೊಂಡಿದ್ದ ಜಾಗೃತಿ ಜಾಥಾಕ್ಕೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಚಾಲನೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಬಾರಿಯ ಲೋಕ್ ಅದಾಲತ್ ನಲ್ಲಿ ೧೦ ಸಾವಿರಕ್ಕೂ ಅಧಿಕ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಗುರಿ ಹೊಂದಲಾಗಿದೆ ಎಂದರು. ಲೋಕ್ ಅದಾಲತ್ ರಾಜೀಯಾಗಬಹುದಾದ ಪ್ರಕರಣಗಳನ್ನು ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಉತ್ತಮ ವೇದಿಕೆಯಾಗಿದ್ದು, ಸಾರ್ವಜನಿರು ಇದರ ಸದುಪಯೋಗಪಡೆದುಕೊಳ್ಳಬಹುದಾಗಿದೆ ಎಂದರು.

<><><>

ವಿದ್ಯಾರ್ಥಿ ದಿಸೆಯಲ್ಲಿ ಜೀವನಾವಶ್ಯಕ ಕಾನೂನುಗಳ ಬಗ್ಗೆ ಅರಿವು ಮೂಡಿಸಿದರೆ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳುತ್ತಾರೆ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಗ್ರಾಮೀಣ ಜನರಿಗೆ ಅರಿವು ಮೂಡಿಸಬೇಕು ಎಂದು ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಧೀಶ ಆರ್. ನಟೇಶ್ ತಿಳಿಸಿದ್ದಾರೆ. ಅವರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೋಲಾರ, ಹಾಗೂ ವಕೀಲರ ಸಂಘ ಕೋಲಾರ ಸರ್ಕಾರಿ ಪದವಿ ಪೂರ್ವ ಕಾಲೇಜು ವೇಮಗಲ್ ಇವರ ಸಂಯುಕ್ತಾಶ್ರದಲ್ಲಿ

ಪಟ್ಟಣದ ಶಾಲಾ ಆವರಣದಲ್ಲಿ ಆಯೋಜಿಸಿದ್ದ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಕುರಿತು ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಾನೂನಿನ ಅರಿವಿಲ್ಲದೆ ಮಾಡಿದ ತಪ್ಪಿಗೆ ಕ್ಷಮೆಯಿಲ್ಲ. ವಿದ್ಯಾರ್ಥಿಗಳು ದೈನಂದಿನ ಬದುಕಿನಲ್ಲಿ ಅತ್ಯಗತ್ಯ ಕಾನೂನು ಬಗ್ಗೆ ಅರಿವು ಪಡೆಯಬೇಕು. ಗ್ರಾಮೀಣ ಭಾಗದಲ್ಲಿ ಬಾಲ್ಯವಿವಾಹ ಪ್ರಕರಣ ನಡೆದರೆ ಮಕ್ಕಳು ನ್ಯಾಯಾಲಯ ಅಥವಾ ಸ್ಥಳೀಯ ಪೊಲೀಸರ ಗಮನಕ್ಕೆ ತರಬೇಕು. ಬಾಲ್ಯವಿವಾಹ ಕಾನೂನು ಪ್ರಕಾರ ಅಪರಾಧ. ಮಕ್ಕಳಿಗೆ ಶಿಕ್ಷಣವು ಹಕ್ಕಾಗಿದೆ, ಯಾವುದೇ ಮಗುವನ್ನು ಶಾಲೆಗೆ ಕಳುಹಿಸದೆ ದುಡಿಸಿಕೊಳ್ಳುವುದು ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕಾಯ್ದೆ ಪ್ರಕಾರ ಅಪರಾಧ ಎಂದು ಅವರು ಹೇಳಿದರು.

<><><>

ವಿಶ್ವ ಪರಿಸರ ದಿನಾಚರಣೆ ೨೦೨೫ರ ಅಂಗವಾಗಿ ನಾಗಮಂಗಲದ ಕಾಚೇನಹಳ್ಳಿ-ಅಂಕುಶಾಪುರ ಗ್ರಾಮದಲ್ಲಿ ನ್ಯಾಯಮೂರ್ತಿಗಳ ಅಧ್ಯಕ್ಷತೆಯಲ್ಲಿ ೫ ಸಾವಿರ ಗಿಡ ನೆಡುವ ಗುರಿ ಹೊಂದಲಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸುಮಾರು ೨೦೦ ಎಕರೆ ಜಾಗದಲ್ಲಿ ಗಿಡ ನೆಡುವ ಕಾರ್ಯಕ್ರಮದಲ್ಲಿ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು, ಉಪ ಲೋಕಾಯುಕ್ತರು ಭಾಗವಹಿಸಲಿದ್ದು, ಕಾರ್ಯಕ್ರಮ ಯಾವುದೇ ಲೋಪವಾಗದಂತೆ ಸಂಘಟಿತವಾಗಬೇಕು ಎಂದು ಸೂಚಿಸಿದ್ದಾರೆ. ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಇದಾಗಿದ್ದು, ಕಾಲೇಜು ವಿದ್ಯಾರ್ಥಿಗಳು, ಎನ್.ಎಸ್.ಎಸ್ ಘಟಕದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಇದಕ್ಕೆ ಪೂರಕವಾಗಿ ಅವಶ್ಯಕವಿರುವ ಕಡೆ ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕೆಂದರು.

<><><>

೨೦೨೫-೨೬ನೇ ಸಾಲಿನ ಅಲ್ಪಸಂಖ್ಯಾತ ಸಮುದಾಯದ ಕಾನೂನು ಪದವೀಧರರು ವೃತ್ತಿ ತರಬೇತಿಯ ಶಿಷ್ಯವೇತನ ಅರ್ಜಿ ಸಲ್ಲಿಸಲು ಇದೇ ೨೧ ರವರಗೆ ಅವಧಿ ವಿಸ್ತರಣೆ ಮಾಡಲಾಗಿದೆ ಎಂದು ವಿಜಯನಗರ ಜಿಲ್ಲಾ ಅಲ್ಪಸಂಖ್ಯಾರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಮತ್ತು ಪಾರ್ಸಿ ಸಮುದಾಯದ ಶಿಷ್ಯವೇತನ ಪಡೆಯಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು, ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆಯ ಕುಮಟಾದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಮಹಿಳೆಯರಿಗಾಗಿ ೩೦ ದಿನಗಳ ಉಚಿತ ಬ್ಯೂಟಿ ಪಾರ್ಲರ್ ತರಬೇತಿ ಹಮ್ಮಿಕೊಳ್ಳಲಾಗಿದೆ. ತರಬೇತಿ ಇದೇ ಜುಲೈ ೧೪ ರಿಂದ ಅಗಸ್ಟ್ ೧೭ ರವರೆಗೆ ನಡೆಯಲಿದೆ. ತರಬೇತಿಯು ಊಟ ಮತ್ತು ವಸತಿ ಸಹಿತ ಉಚಿತವಾಗಿರುತ್ತದೆ. ಅಭ್ಯರ್ಥಿಯು ನಿರುದ್ಯೋಗಿಯಾಗಿದ್ದು, ಸ್ವಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ವಯೋಮಿತಿ ೧೮ ರಿಂದ ೪೫ ವರ್ಷಗಳು. ಆಸಕ್ತರು ನೇರವಾಗಿ ನಿರ್ದೇಶಕರು, ಕೆನರಾ ಬ್ಯಾಂಕ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆ, ಕೈಗಾರಿಕಾ ವಸಾಹತು ಪ್ರದೇಶ, ಹೆಗಡೆ ರಸ್ತೆ, ಕುಮಟಾ -೫೮೧೩೪೩ ಉತ್ತರಕನ್ನಡ ಜಿಲ್ಲೆ ಇವರಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

<><><>

ಸಂಕ್ಷಿಪ್ತ ಸುದ್ದಿಗಳು

1. ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲೂಕು, ಕೈವಾರದ ಯೋಗಿ ನಾರೇಯಣ ಮಠದಲ್ಲಿ ಗುರುಪೂರ್ಣಿಮೆ ಅಂಗವಾಗಿ ಇಂದಿನಿಂದ ೭೨ ಗಂಟೆಗಳ ಕಾಲ ನಿರಂತರ ಸಂಗೀತೋತ್ಸವ ಹಾಗೂ ಗುರು ಪೂಜಾ ಮಹೋತ್ಸವ ಆಯೋಜಿತವಾಗಿದೆ.
2. ವೈದ್ಯಕೀಯ ಶಿಕ್ಷಣ ಮತ್ತು ಕೌಶಲಾಭಿವೃದ್ಧಿ ಖಾತೆ ಸಚಿವ ಶರಣ ಪ್ರಕಾಶ ಪಾಟೀಲ ಇಂದು ಮತ್ತು ನಾಳೆ ಕಲಬುರಗಿ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅವರು ಚಾಲನೆ ನೀಡಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>